# ಕರ್ನಾಟಕಸರ್ಕಾರ

ಸಂಖ್ಯೆ:ಹಿಂವಕ 486 ಬಿಎಂಎಸ್ 2022

ಕರ್ನಾಟಕ ಸರ್ಕಾರ ಸಚಿವಾಲಯ

ವಿಕಾಸಸೌಧ
ಬೆಂಗಳೂರು, ದಿನಾಂ 14.09.2022

## ಸುತ್ತೋಲೆ

**ವಿಷಯ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ವಿವಿಧ ಸಮುದಾಯ ಅಭಿವೃದ್ಧಿ ಕಾರ್ಯಕ್ರಮದಡಿ ಅನುದಾನ ಪಡೆದ ಸಂಘ-ಸಂಸ್ಥೆಗಳ ಶಿಲಾಫಲಕದಲ್ಲಿ ಅನುದಾನದ ವಿವರಗಳನ್ನು ಮುದ್ರಿಸುವ ಬಗ್ಗೆ.

ಹಿಂದುಳಿದ ವರ್ಗಗಳಿಗೆ ಸೇರಿದ ವಿವಿಧ ಸಂಘ-ಸಂಸ್ಥೆಗಳಿಗೆ ವಿವಿಧ ಸಮುದಾಯ ಅಭಿವೃದ್ಧಿ ಕಾರ್ಯಕ್ರಮದಡಿ ಗ್ರಾಮ ಪಂಚಾಯತ್/ತಾಲ್ಲೂಕು ಪಂಚಾಯತ್ / ಜಿಲ್ಲಾ ವ್ಯಾಪ್ತಿಗಳಲ್ಲಿ ಸಮುದಾಯ ಭವನ/ವಿದ್ಯಾರ್ಥಿ ನಿಲಯಗಳನ್ನು ನಿರ್ಮಿಸಲು ಅನುದಾನ ಮಂಜೂರು ಮಾಡಲಾಗುತ್ತಿದೆ. ಈ ರೀತಿ ಇಲಾಖೆಯ ವತಿಯಿಂದ ಅನುದಾನ ಪಡೆದ ಸಂಘ-ಸಂಸ್ಥೆಗಳು ಅನುದಾನದ ವಿವರಗಳನ್ನು ಸದರಿ ಕಟ್ಟಡದ ಶಿಲಾಫಲಕದಲ್ಲಿ ನಮೂದಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಈ ಹಿನ್ನಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿವಿಧ ಸಮುದಾಯ ಅಭಿವೃದ್ಧಿ ಕಾರ್ಯಕ್ರಮದಡಿ ಅನುದಾನ ಪಡೆದ ಸಂಘ-ಸಂಸ್ಥೆಗಳು ನಿರ್ಮಿಸುವ ಕಟ್ಟಡದ ಶಿಲಾಫಲಕದಲ್ಲಿ **"ಈ ಸಮುದಾಯ ಭವನ/ವಿದ್ಯಾರ್ಥಿ ನಿಲಯವನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ ------ (ಮಂಜೂರಾದ ವರ್ಷ)ರಲ್ಲಿ ಒದಗಿಸಲಾದ ------ (ಮಂಜೂರಾದ ಒಟ್ಟು ಅನುದಾನ) ರೂ.ಲಕ್ಷಗಳ ಅನುದಾನದಲ್ಲಿ ನಿರ್ಮಿಸಲಾಗಿದೆ'** ಎಂದು ಕಡ್ಡಾಯವಾಗಿ ನಮೂದಿಸುವ ಬಗ್ಗೆ ಇಲಾಖಾ ಅಧಿಕಾರಿಗಳು ಅಗತ್ಯ ಕ್ರಮವಹಿಸುವಂತೆ ಈ ಮೂಲಕ ತಿಳಿಸಿದೆ.

Shaheenparveen 14/09/2022

(ಷಾಹೀನ್ ಪರ್ವೀನ್.ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಇವರಿಗೆ:**

1. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಸಂತನಗರ, ಬೆಂಗಳೂರು.
2. ಎಲ್ಲಾ ಜಿಲ್ಲಾಧಿಕಾರಿಗಳು.(ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,ಇವರ ಮುಖಾಂತರ)
3. ಎಲ್ಲಾ ಜಿಲ್ಲಾ ಪಂಚಾಯತ್, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು. (ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಮುಖಾಂತರ)
4. ಎಲ್ಲಾ ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ (ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಮುಖಾಂತರ)

**ಪ್ರತಿ:**

1. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು.
4. ಶಾಖಾ ರಕ್ಷಾ ಕಡತ

*******